**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ, ನ್ಯಾಯಾಲಯ, ಗುಂಡ್ಲುಪೇಟೆ**

**ಸಿ.ಸಿ ಸಂಖ್ಯೆ: 265/2020**

| | | |
|---|---|---|
| ಸಾಕ್ಷಿದಾರರ ಹೆಸರು | ಶ್ರೀ ನಾಗರಾಜು.ಹೆಚ್ . ಎಂ | ಪ್ರಮಾಣ ಮಾಡಿದ ದಿನಾಂಕಃ 07.04.2025 |
| ತಂದೆ ಹೆಸರು | ಮಾದಯ್ಯ | |
| ವಯಸ್ಸು | 48 ವರ್ಷ | |
| ವೃತ್ತಿ | ಮುಖ್ಯ ಪೇದೆ, ತೆರಕಣಾಂಬಿ ಪೊಲೀಸ್ ಠಾಣೆ | ಚಾಸಾ: 7 |
| ವಾಸಸ್ಥಳ | ಗುಂಡ್ಲುಪೇಟೆ | ಫ್ರಾಸಾ: 2 |

**ದಿನಾಂಕಃ** 07.04.2025 **ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ ಮಾನ್ಯ ಎಪಿಪಿಯವರಿಂದಃ**

ನಾನು 2020 ರಿಂದ 2022 ರವರೆಗೆ ಬೇಗೂರು ಪೊಲೀಸ್ ಠಾಣೆಯಲ್ಲಿ ಮುಖ್ಯ ಪೇದೆ ಆಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

ದಿಃ 12.10.2020 ರಂದು ನಾನು ಠಾಣಾ ಕರ್ತವ್ಯದಲ್ಲಿದ್ದಾಗ ಸು. 1.00 ಗಂಟೆಗೆ ಠಾಣಾ ಪಿ.ಸಿ. ಲೊಕೇಶ್ ರವರ ಮೂಲಕ ಠಾಣಾ ಪಿ.ಎಸ್.ಐ ರವರಾದ ಪುನೀತ್ ರವರು ಒಂದು ವರದಿಯನ್ನು ಸ್ವೀಕರಿಸಿ ಠಾಣಾ ಮೊಕದ್ದಮೆ ಸಂಖ್ಯೆ 109/2020ರಲ್ಲಿ ಪ್ರಕರಣವನ್ನು ನೊಂದಾಯಿಸಿ ಪ್ರ.ವ.ವರದಿಯನ್ನು ಪಿ.ಸಿ. 404 ರವರ ಮೂಲಕ ಮಾನ್ಯ ಘನ ನ್ಯಾಯಾಲಯಕ್ಕೆ ಮತ್ತು ನನ್ನ ಮೇಲಾಧಿಕಾರಿಗಳಿಗೆ ನಿವೇದಿಸಿಕೊಂಡಿರುತ್ತೇನೆ.

ಚಾಸಾ-1 ರವರು ಹಾಜರು ಮಾಡಿದ ಸಾಕ್ಷಿದಾರರು, ಮಾಲು ವಶಕ್ಕೆ ಪಡೆದುಕೊಂಡು ಚಾಸಾ-2 ರಿಂದ 5 ರವರ ಹೇಳಿಕೆಗಳನ್ನು ಪಡೆದುಕೊಂಡಿರುತ್ತೇನೆ. ನಂತರ ಮಾಲುಗಳನ್ನು ಅಮಾನತ್ತುಪಡಿಸಿಕೊಂಡು ಮಾಲುಪಟ್ಟಿಯಲ್ಲಿ ನಮೂದಿಸಿ ಪಿ.ಎಫ್ ನಂ. 97/2020 ರಂತೆ ಮಾನ್ಯ ನ್ಯಾಯಾಲಯಕ್ಕೆ ಸಲ್ಲಿಸಿರುತ್ತೇನೆ.

ಆರೋಪಿತರ ಮೇಲೆ ದಸ್ತಗಿರಿ ಕ್ರಮ ಅನುಸರಿಸಿ ನೋಟೀಸ್ ಜಾರಿ ಮಾಡಿ ಬಿಡುಗಡೆ ಮಾಡಿರುತ್ತೇನೆ. ವಶಕ್ಕೆ ತೆಗೆದುಕೊಂಡ ಜಾನುವಾರುಗಳನ್ನು ಹೆಚ್.ಸಿ. 254 ರವರಮತ್ತು ಪಿ.ಸಿ.206 ಮೂಲಕ ಮೈಸೂರಿನ ಪಿಂಜರಾಪೋಲ್ ಗೆ ಕಳುಹಿಸಿರುತ್ತೇನೆ ಮತ್ತು ನ್ಯಾಯಾಲಯಕ್ಕೆ ಈ ಬಗ್ಗೆ ನಿವೇದಿಸಿಕೊಂಡಿರುತ್ತೇನೆ. ಈ ಬಗ್ಗೆ ರಸೀದಿಯನ್ನು ಪಡೆದು ಕಡತಕ್ಕೆ ಅಳವಡಿಸಿಕೊಂಡಿರುತ್ತೇನೆ. ಮೈಸೂರಿನ ಪಿಂಜರಾಪೋಲ್ ನಿಂದ ಜಾನುವಾರಗಳ ಬಗ್ಗೆ ವೈದ್ಯಕೀಯ ಪ್ರಮಾಣ ಪತ್ರವನ್ನು ಪಡೆದು ಕಡತಕ್ಕೆ ಅಳವಡಿಸಿಕೊಂಡಿರುತ್ತೇನೆ.

ಸಾಕ್ಷಿಯು ಮಹಜರ್ ನ್ನು ನೋಡಿ ಗುರುತಿಸಿದ್ದು, ಅದನ್ನು ಈಗಾಗಲೇ ನಿಪಿ–1 ಎಂದು ಮತ್ತು ಅದರಲ್ಲಿ ಇರುವ ಸಾಕ್ಷಿದಾರರ ಸಹಿಯನ್ನು ನಿಪಿ–1(ಬಿ) ಎಂದು ಗುರುತಿಸಲಾಯಿತು.

ಸಾಕ್ಷಿಯು ವರದಿಯನ್ನು ನ್ನು ನೋಡಿ ಗುರುತಿಸಿದ್ದು, ಅದನ್ನು ನಿಪಿ–2 ಎಂದು ಮತ್ತು ಅದರಲ್ಲಿ ಇರುವ ಸಾಕ್ಷಿದಾರರ ಸಹಿಯನ್ನು ನಿಪಿ–2(ಎ) ಎಂದು ಗುರುತಿಸಲಾಯಿತು.

ಸಾಕ್ಷಿಯು ಪ್ರ.ವವರದಿಯನ್ನು ನೋಡಿ ಗುರುತಿಸಿದ್ದು, ಅದನ್ನು ನಿಪಿ–3 ಎಂದು ಗುರುತಿಸಲಾಯಿತು.

ಮೈಸೂರು ಪಿಂಜರಾಪಾಲ್ ಸೊಸೈಟಿ ರವರು ಕೊಟ್ಟಿರುವ ಪ್ರಮಾಣ ಪತ್ರವನ್ನು ನಿಪಿ–4 ಎಂದು ಮತ್ತು ಅದರಲ್ಲಿ ಇರುವ ಸಾಕ್ಷಿದಾರರ ಸಹಿಯನ್ನು ನಿಪಿ–4(ಎ) ಎಂದು ಗುರುತಿಸಲಾಯಿತು.

ಮೈಸೂರು ಪಿಂಜರಾಪಾಲ್ ಸೊಸೈಟಿ ರವರು ಕೊಟ್ಟಿರುವ ಅನಿಮಲ್ ಹೆಲ್ತ್ ಪ್ರಮಾಣ ಪತ್ರವನ್ನು ಸಾಕ್ಷಿ ನೋಡಿ ಗುರುತಿಸಿದ್ದು, ಅದನ್ನು ನಿಪಿ–5 ಎಂದು ಗುರುತಿಸಲಾಯಿತು.

ನ್ಯಾಯಾಲಯಕ್ಕೆ ಸಲ್ಲಿಸಿರುವ ಅನುಮತಿ ಪತ್ರವನ್ನು ನೋಡುತ್ತಿದ್ದು, ಅದನ್ನು ನಿಪಿ–6 ಎಂದು ಸಾಕ್ಷಿಯ ಸಹಿಯನ್ನು ನಿಪಿ–6(ಎ) ಎಂದು ಗುರುತಿಸಲಾಯಿತು.

1ನೇ ಆರೋಪಿಯನ್ನು ನೋಡಿ ಗುರುತಿಸಿರುತ್ತಾರೆ. 2ನೇ ಆರೋಪಿಯನ್ನು ನೋಡಿದರೆ ಗುರುತಿಸುತ್ತೇನೆ. ವಾಹನವನ್ನು ನೋಡಿದರೆ ಗುರುತಿಸುತ್ತೇನೆ.

**ಪಾಟೀ ಸವಾಲು: ಆರೋಪಿಗಳ ಪರ ವಕೀಲರಾದ ಶ್ರೀ ವೈ.ಕೆ. ರವರಿಂದಃ**

ನಾನು ಯಾವುದೇ ತನಿಖೆ ಮಾಡಿಲ್ಲ ಮತ್ತು ಯಾವುದೇ ಸಾಕ್ಷಿದಾರರ ಹೇಳಿಕೆಗಳನ್ನು ಪಡೆದಿಲ್ಲ ಎಂದರೆ ಸರಿಯಲ್ಲ. ಮುಮಾಗಳಿಗೂ ಮತ್ತು ಈ ಪ್ರಕರಣಕ್ಕೂ ಯಾವುದೇ ಸಂಬಂಧವಿಲ್ಲ ಎಂದರೆ ಸರಿಯಲ್ಲ. ಠಾಣಾ ಅಂಕಿಅಂಶಕ್ಕೋಸ್ಕರ ಸುಳ್ಳು ದೊ.ಪಟ್ಟಿ ಸಲ್ಲಿಸಿರುತ್ತೇನೆ ಎಂದರೆ ಸರಿಯಲ್ಲ. ಪ್ರಕರಣಕ್ಕೂ ಮತ್ತು ಆರೋಪಿಗಳಿಗೂ ಯಾವುದೇ ಸಂಬಂಧವಿಲ್ಲ ಎಂದರೆ ಸರಿಯಲ್ಲ.

**ಮರು ವಿಚಾರಣೆ ಇರುವುದಿಲ್ಲ.**

**(ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚುಗಾರರಿಗೆ ಉಕ್ತ ಲೇಖನ ಕೊಟ್ಟು ಓದಿ ನೋಡಿ ಸರಿಪಡಿಸಿ ನಂತರ ಮಾಡಲಾಯಿತು)**

ಓ ಹೇ ಕೇ ಸ ಇ ಎ ಒ

**(ಎ.ಎನ್.ಕಾಂತಮ್ಮ)**
ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ
ಗುಂಡ್ಲುಪೇಟೆ